ಐ-72 (30)

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಮರಿತಿಬ್ಬೇಗೌಡ ರವರು ನಿಯಮ 72 ರ ಅಡಿಯಲ್ಲಿ ಪ್ರಸ್ತಾಪಿಸಿರುವ ಸೂಚನಾ ಪತ್ರಕ್ಕೆ ಮಾನ್ಯ ಮುಖ್ಯಮಂತ್ರಿರವರ ಹೇಳಿಕೆ**

**ವಿಷಯ:** ಬೆಂಗಳೂರು ದಕ್ಷಿಣ ತಾಲ್ಲೂಕು, ಬೇಗೂರು ಹೋಬಳಿ, ದೇವರಚಿಕ್ಕನಹಳ್ಳಿ ಗ್ರಾಮದ ಸರ್ವೆ ನಂ.27/2 ರಲ್ಲಿ 3 ಎಕರೆ 23 ಗುಂಟೆ ಜಮೀನಿಗೆ ಸಂಬಂಧಿಸಿದಂತೆ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರವು ಅಂತಿಮ ಅಧಿಸೂಚನೆ ಹೊರಡಿಸಿದ್ದರೂ ಸಾರ್ವಜನಿಕರಿಗೆ ಹಂಚಿಕೆಯಾಗಿರುವ ಜಮೀನನ್ನು ಕಾನೂನು ಬಾಹಿರವಾಗಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಅಧಿಕಾರಿಗಳು, ಭೂಗಳ್ಳರ ಜೊತೆ ಶಾಮೀಲಾಗಿ ಅನಧಿಕೃತವಾಗಿ, ಭೂಗಳ್ಳರ ಪರವಾಗಿ ಹಿಂಬರಹ ನೀಡಿರುವುದರಿಂದ ಸರ್ಕಾರದ ಬೊಕ್ಕಸಕ್ಕೆ ಬಾರಿ ಪ್ರಮಾಣದ ನಷ್ಟ ಉಂಟಾಗಿರುವ ಗಂಭೀರ ಸಮಸ್ಯೆ ಕುರಿತು.

***

**ಉತ್ತರ :** ಬೆಂಗಳೂರು ದಕ್ಷಿಣ ತಾಲ್ಲೂಕು, ಬೇಗೂರು ಹೋಬಳಿ, ದೇವರಚಿಕ್ಕನಹಳ್ಳಿ ಗ್ರಾಮದ ಸರ್ವೆ ನಂ.27/2 ರಲ್ಲಿ 3 ಎಕರೆ 23 ಗುಂಟೆ ಜಮೀನನ್ನು ಪ್ರಾಧಿಕಾರದ ಬಿ.ಟಿ.ಎಂ. 4ನೇ ಹಂತದ ಬಡಾವಣೆ ರಚನೆಗಾಗಿ ಅಂತಿಮ ಅಧಿಸೂಚನೆ ದಿನಾಂಕ: 03.11.1990 ರಂದು ಹೊರಡಿಸಲಾಗಿದೆ. ಸದರಿ ಜಮೀನಿಗೆ ಐತೀರ್ಪು ಅನುಮೋದನೆಯಾಗಿದ್ದು, ಸದರಿ ಜಮೀನನ್ನು ಸ್ವಾಧೀನ ಪಡೆದು ಬಡಾವಣೆ ರಚನೆಗಾಗಿ ದಿನಾಂಕ: 30.11.1996 ರಂದು ತಾಂತ್ರಿಕ ವಿಭಾಗಕ್ಕೆ ಹಸ್ತಾಂತರಿಸಲಾಗಿರುತ್ತದೆ. ಭೂಸ್ವಾಧೀನ ಕಾಯ್ದೆ 1894 ರ ಕಲಂ 16(2) ರಡಿಯಲ್ಲಿ ಹೊರಡಿಸಿರುವ ಅಧಿಸೂಚನೆಯನ್ನು ಕರ್ನಾಟಕ ರಾಜ್ಯ ಪತ್ರದಲ್ಲಿ ದಿನಾಂಕ: 08.02.2001 ರ ಪ್ರಚುರಪಡಿಸಲಾಗಿದೆ. ಜಮೀನಿನ ಭೂಸ್ವಾಧೀನ ಪ್ರಕ್ರಿಯೆ ಮುಕ್ತಾಯವಾಗಿರುತ್ತದೆ.

ನಂತರ ಶ್ರೀಮತಿ ಶಾಂತಮ್ಮ ಮತ್ತು ಇತರರು ಸದರಿ ಜಮೀನಿನ ಭೂಸ್ವಾಧೀನದ ಕ್ರಮವನ್ನು ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ಪ್ರಶ್ನಿಸಿ ರಿಟ್ ಅರ್ಜಿ ಸಂಖ್ಯೆ: 41386-395/2017 ನ್ನು ದಾಖಲಿಸಿದ್ದರು. ಈ ಪ್ರಕರಣದಲ್ಲಿ ಮಾನ್ಯ ನ್ಯಾಯಾಲಯವು ದಿನಾಂಕ: 24.10.2019 ರಂದು ಅಂತಿಮ ಆದೇಶವನ್ನು ನೀಡಿದ್ದು, ಪ್ರಕರಣದಲ್ಲಿನ ಅರ್ಜಿದಾರರು ಈ ಕುರಿತು ದಿನಾಂಕ:14.01.2020 ರಂದು ಪ್ರಾಧಿಕಾರಕ್ಕೆ ಅರ್ಜಿ ಸಲ್ಲಿಸಿ, ಹಿಂಬರಹವನ್ನು ನೀಡುವಂತೆ ಕೋರಿದ್ದು,

ಅದರಂತೆ ಸದರಿ ಮನವಿಯನ್ನು ಪರಿಶೀಲಿಸಿ, ಪ್ರಾಧಿಕಾರದ ಕಾನೂನು ವಿಭಾಗದ ಕಾನೂನು ಅಧಿಕಾರಿಗಳ ಕಾನೂನು ಸಲಹೆಯ ಮೇರೆಗೆ ಅಂದಿನ ಪ್ರಾಧಿಕಾರದ ಆಯುಕ್ತರು ಕರಡು ಹಿಂಬರಹಕ್ಕೆ ಅನುಮೋದನೆ ನೀಡಿರುವಂತೆ ಸದರಿ ಸರ್ವೆ ನಂಬರ್‌ನ ವಾಸ್ತವಾಂಶ ಮಾಹಿತಿಯನ್ನು ಹಿಂಬರಹದಲ್ಲಿ ನಿಯಮಾನುಸಾರ ನೀಡಲಾಗಿರುತ್ತದೆ. ಈ ಹಿಂಬರಹವು ನಿರಾಕ್ಷೇಪಣಾ ಪತ್ರವಾಗಿರುವುದಿಲ್ಲ. ಪ್ರಾಧಿಕಾರದಿಂದ ನೀಡಲಾಗಿದ್ದ ಹಿಂಬರಹವು ದುರುಪಯೋಗವಾಗುತ್ತಿರುವುದು ಚರ್ಚೆಯಲ್ಲಿರುವುದರಿಂದ ಈ ಕುರಿತು ಸದರಿ ನ್ಯಾಯಾಲಯದ ಆದೇಶವನ್ನು ಮತ್ತೊಮ್ಮೆ ಕಾನೂನಾತ್ಮಕವಾಗಿ ಪರಿಶೀಲಿಸಿ, ನ್ಯಾಯಾಲಯದಲ್ಲಿ ಮೇಲ್ಮನವಿ ಸಲ್ಲಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.

---

**ಸಂಖ್ಯೆ: ನಅಇ 15 ಬೆಂಭೂಸ್ವಾ 2021**

(ಬಿ.ಎಸ್. ಯಡಿಯೂರಪ್ಪ)
ಮುಖ್ಯಮಂತ್ರಿ